# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## **ಚುಕ್ಕೆ ಗುರುತಿನ ಪ್ರಶ್ನೆ**

ದಿನಾಂಕ : 31-03-2021

ಪ್ರಶ್ನೆ ಸಂಖ್ಯೆ : 358 (2506)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು)

ಉತ್ತರ ನೀಡಬೇಕಾದ ದಿನಾಂಕ : 31-03-2021

ಉತ್ತರಿಸುವ ಸಚಿವರು : ಕಂದಾಯ ಸಚಿವರು

ವಿಷಯ : ಕೊಡಗು ಜಿಲ್ಲೆಯಲ್ಲಿ ಭೂ ಮಂಜೂರಾತಿಗಾಗಿ ಫಾರಂ-57 ಅರ್ಜಿ ಸಲ್ಲಿಸಲು ಮತ್ತೊಮ್ಮೆ ಕಾಲಾವಕಾಶ ಕಲ್ಪಿಸುವ ಕುರಿತು

(ಅ) ಕೊಡಗು ಜಿಲ್ಲೆಯಲ್ಲಿ, ಒತ್ತುವರಿದಾರರು ಭೂ ಮಂಜೂರಾತಿಗಾಗಿ ಫಾರಂ-57 ಅರ್ಜಿ ಸಲ್ಲಿಸಲು ಇದ್ದ ಕಾಲಾವಕಾಶವನ್ನು 2019ರಲ್ಲಿ ಚುನಾವಣೆ ಘೋಷಣೆಯಾದ ಹಿನ್ನೆಲೆಯಲ್ಲಿ ಅರ್ಜಿ ಸ್ವೀಕೃತಿ ಪ್ರಕ್ರಿಯೆಯನ್ನು ಏಕಾಏಕಿ ಸ್ಥಗಿತಗೊಳಿಸಿದ್ದರಿಂದ ಹಲವು ಅರ್ಹ ಫಲಾನುಭವಿಗಳು ಅರ್ಜಿ ಸಲ್ಲಿಸಲು ಸಾಧ್ಯವಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಜಿಲ್ಲೆಯಲ್ಲಿ ಭೂ ಮಂಜೂರಾತಿಗಾಗಿ ಫಾರಂ-57 ಅರ್ಜಿ ಸಲ್ಲಿಸಲು ಅವಕಾಶ ವಂಚಿತರಿಗೆ ಮತ್ತೊಮ್ಮೆ ಕಾಲಾವಕಾಶ ಕಲ್ಪಿಸಲಾಗುವುದೇ; (ವಿವರ ನೀಡುವುದು)

(ಇ) ದೇಶ ರಕ್ಷಣೆಗಾಗಿ ತಮ್ಮ ಅಮೂಲ್ಯ ಜೀವನವನ್ನೇ ಮುಡುಪಾಗಿಟ್ಟ ಹಲವಾರು ಮಾಜಿ ಸೈನಿಕರು ಹಾಗೂ ಅವರ ಅವಲಂಬಿತರು ಭೂ ಮಂಜೂರಾತಿಗಾಗಿ ಫಾರಂ-57 ಅರ್ಜಿ ಸಲ್ಲಿಸಲು ಸಾಧ್ಯವಾಗದಿರವುದನ್ನು ವಿಶೇಷವಾಗಿ ಪರಿಗಣಿಸಿ, ಯಾವ ಕಾಲಮಿತಿಯೊಳಗೆ ಮತ್ತೊಮ್ಮೆ ಅವರಿಗೆ ಕಾಲಾವಕಾಶ ಕಲ್ಪಿಸಲಾಗುವುದು?